**ಭೂತಾನ್‌ಗೆ ಪ್ರಧಾನಮಂತ್ರಿಗಳ ಭೇಟಿ (ನವೆಂಬರ್ 11-12, 2025)**

ನವೆಂಬರ್ 08, 2025

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು 2025 ನವೆಂಬರ್ 11-12 ರಂದು ಭೂತಾನ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಈ ಭೇಟಿಯು ಎರಡು ದೇಶಗಳ ನಡುವೆ ಸ್ನೇಹ ಮತ್ತು ಸಹಕಾರದ ವಿಶೇಷ ಸಂಬಂಧಗಳನ್ನು ಬಲಪಡಿಸಲು ಪ್ರಯತ್ನಿಸುತ್ತದೆ ಮತ್ತು ನಿಯಮಿತ ದ್ವಿಪಕ್ಷೀಯ ಉನ್ನತ ಮಟ್ಟದ ವಿನಿಮಯಗಳ ಸಂಪ್ರದಾಯಕ್ಕೆ ಅನುಗುಣವಾಗಿದೆ.

2. ಭೇಟಿಯ ಸಮಯದಲ್ಲಿ, ಪ್ರಧಾನಮಂತ್ರಿ ಅವರು ಭೂತಾನ್‌ನ ರಾಜ ಜಿಗ್ಮೆ ಖೇಸರ್ ನಮ್ಗ್ಯೆಲ್ ವಾಂಗ್‌ಚುಕ್ ಅವರನ್ನು ಭೇಟಿ ಮಾಡಲಿದ್ದಾರೆ ಮತ್ತು ಉಭಯ ನಾಯಕರು ಭಾರತ ಸರ್ಕಾರ ಮತ್ತು ಭೂತಾನ್ ರಾಜವಂಶ ಸರ್ಕಾರ ಜಂಟಿಯಾಗಿ ಅಭಿವೃದ್ಧಿಪಡಿಸಿರುವ 1020 ಮೆಗಾವ್ಯಾಟ್ ಪುನತ್ಸಂಗ್ಚು-II ಜಲವಿದ್ಯುತ್ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಭೂತಾನ್‌ನ ನಾಲ್ಕನೇ ರಾಜ, ಗೌರವಾನ್ವಿತ ಜಿಗ್ಮೆ ಸಿಂಗ್ಯೆ ವಾಂಗ್‌ಚುಕ್ ಅವರ 70 ನೇ ಹುಟ್ಟುಹಬ್ಬ ಪ್ರಯುಕ್ತ ನಡೆಸುವ ಆಚರಣೆಗಳಲ್ಲಿ ಪ್ರಧಾನಮಂತ್ರಿ ಭಾಗವಹಿಸುತ್ತಾರೆ. ಪ್ರಧಾನಮಂತ್ರಿ ಅವರು ಭೂತಾನ್‌ನ ಪ್ರಧಾನಮಂತ್ರಿ ಗೌರವಾನ್ವಿತ ಶ್ರೀ ತ್ಸೆರಿಂಗ್ ಟೋಬ್ಗೆ ಅವರನ್ನು ಕೂಡ ಭೇಟಿ ಮಾಡುತ್ತಾರೆ.

3. ಭಾರತದಿಂದ ಭೂತಾನ್‌ಗೆ ಕಳುಹಿಸಲಾದ ಭಗವಾನ್ ಬುದ್ಧರ ಪವಿತ್ರ ಪಿಪ್ರಹ್ವಾ ಅವಶೇಷಗಳ ಪ್ರದರ್ಶನ ನಡೆಸುತ್ತಿರುವ ಸಂದರ್ಭದಲ್ಲೇ ಪ್ರಧಾನಮಂತ್ರಿಯ ಈ ಭೇಟಿ ನಡೆಯುತ್ತಿದೆ. ಪ್ರಧಾನಮಂತ್ರಿಯವರು ಥಿಂಪುವಿನ ತಾಶಿಚೋಡ್‌ಜಾಂಗ್‌ನಲ್ಲಿ ಪವಿತ್ರ ಅವಶೇಷಗಳಿಗೆ ಪ್ರಾರ್ಥನೆ ಸಲ್ಲಿಸಲಿದ್ದಾರೆ ಮತ್ತು ಭೂತಾನಿನ ರಾಜವಂಶ ಸರ್ಕಾರ ಆಯೋಜಿಸಿರುವ ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿಯೂ ಭಾಗವಹಿಸಲಿದ್ದಾರೆ.

4. ಭಾರತ ಮತ್ತು ಭೂತಾನ್ ಆಳವಾದ ಪರಸ್ಪರ ವಿಶ್ವಾಸ, ಸದ್ಭಾವನೆ ಮತ್ತು ಪರಸ್ಪರ ಗೌರವದಿಂದ ಗುರುತಿಸಲಾದ ವಿಶಿಷ್ಟ ಮತ್ತು ಅನುಕರಣೀಯ ಪಾಲುದಾರಿಕೆಯನ್ನು ಹಂಚಿಕೊಳ್ಳುತ್ತವೆ. ಹಂಚಿಕೆಯ ಆಧ್ಯಾತ್ಮಿಕ ಪರಂಪರೆ ಮತ್ತು ಜನರ ನಡುವಿನ ಆತ್ಮೀಯ ಸಂಬಂಧಗಳು ವಿಶೇಷ ಪಾಲುದಾರಿಕೆಯ ವಿಶಿಷ್ಟ ಲಕ್ಷಣಗಳಾಗಿವೆ. ಪ್ರಧಾನಮಂತ್ರಿಯವರ ಭೇಟಿಯು ನಮ್ಮ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸುವ ಮತ್ತು ಬಲಪಡಿಸುವ ಮಾರ್ಗಗಳ ಬಗ್ಗೆ ಚರ್ಚಿಸಲು ಹಾಗೂ ಪ್ರಾದೇಶಿಕ ಮತ್ತು ಪರಸ್ಪರ ಆಸಕ್ತಿಯ ವ್ಯಾಪಕ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಎರಡೂ ಕಡೆಯವರಿಗೆ ಅವಕಾಶವನ್ನು ಒದಗಿಸುತ್ತದೆ.

ನವ ದೆಹಲಿ

ನವೆಂಬರ್ 08, 2025